ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

18

ಇಲಾಖೆ / ವಿಷಯ : DEPARTMENT / SUBJECT: RDPR

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 29/8/2020

# ಆಸ್ತಿ ಹಕ್ಕಿಗೆ ಸ್ವಾಮಿತ್ವ

ಉ.ವಾ 29/8/20

## ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ರಾಜ್ಯದಲ್ಲೂ ಅನುಷ್ಠಾನ
## 16 ಜಿಲ್ಲೆಗಳ, 16,580 ಹಳ್ಳಿಗಳಲ್ಲಿ ಡ್ರೋನ್ ಮೂಲಕ ಸಮೀಕ್ಷೆ

ಚನ್ನು ಮೂಲಿಮನಿ

ಹುಬ್ಬಳ್ಳಿ: ಗ್ರಾಮೀಣ ಭಾಗದಲ್ಲಿ ತಲೆತಲಾಂತರದಿಂದ ವಾಸಿಸುತ್ತಿದ್ದರೂ ತಮ್ಮ ಜಾಗದ ದಾಖಲೆ ಹೊಂದಿರದವರಿಗೆ 'ಹಕ್ಕುಪತ್ರ' ನೀಡುವ 'ಸ್ವಾಮಿತ್ವ' ಯೋಜನೆ ರಾಜ್ಯದಲ್ಲಿ ಪ್ರಾರಂಭವಾಗಿದೆ.

ಕೇಂದ್ರ ಸರ್ಕಾರದ ಈ ಸ್ವಾಮಿತ್ವ ಯೋಜನೆಯಡಿ ಕಂದಾಯ ಇಲಾಖೆ ಹಾಗೂ ಭಾರತೀಯ ಸರ್ವೇಕ್ಷಣಾ ಸಂಸ್ಥೆಯ ಸಹಭಾಗಿತ್ವದಲ್ಲಿ ಈಗಾಗಲೇ 82 ಹಳ್ಳಿಗಳಲ್ಲಿ ಪ್ರಾಯೋಗಿಕವಾಗಿ ಜಾರಿಯಲ್ಲಿದ್ದು, ಪ್ರಸಕ್ತ ಸಾಲಿನಲ್ಲಿ ಒಟ್ಟಾರೆ 16 ಜಿಲ್ಲೆಗಳ 16,580 ಗ್ರಾಮಗಳಲ್ಲಿ ಡ್ರೋನ್ ಆಧಾರಿತ ಆಸ್ತಿ ಸರ್ವೆ ಕಾರ್ಯ ನಡೆಯಲಿದೆ.

ಗ್ರಾಮೀಣ ಭಾಗದಲ್ಲಿ ಪೂರ್ವಿಕರಿಂದ ಬಳುವಳಿಯಾಗಿ ಬಂದ ಜಮೀನು ಅಥವಾ ಮನೆಯಲ್ಲಿ ವಾಸಿಸುತ್ತಿದ್ದರೂ ತಮ್ಮ ಆಸ್ತಿಯ ಒಟ್ಟು ವಿಸ್ತೀರ್ಣ ಹಾಗೂ ಹದ್ದುಬಸ್ತಿನ ಬಗ್ಗೆ ಯಾವುದೇ ದಾಖಲಾತಿಗಳಿಲ್ಲ. ಗ್ರಾಮ ಪಂಚಾಯಿತಿಯ ದಾಖಲೆಗಳಲ್ಲಿ ಆಸ್ತಿ ಮಾಲೀಕತ್ವದ ಹೆಸರಿದ್ದರೂ ನಿಗದಿತ ಜಾಗದ ಮೇಲೆ ಸಾಲ ಪಡೆಯುವುದಾಗಲಿ, ಮಾರಾಟ ಮಾಡಲು ಆಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಹಕ್ಕುಪತ್ರ ನೀಡುವ 'ಸ್ವಾಮಿತ್ವ' ಯೋಜನೆ ವರದಾನವಾಗಿದೆ.

▶ 7ನೇ ಪುಟಕ್ಕೆ


'ಸ್ವಾಮಿತ್ವ' ಯೋಜನೆ ರಾಜ್ಯದಲ್ಲಿ ಜಾರಿಯಲ್ಲಿದೆ. ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಇದಾಗಿದ್ದು 16 ಜಿಲ್ಲೆಗಳಲ್ಲಿ ಚಾಲನೆ ನೀಡಲಾಗಿದೆ.



- ಕೆ.ಎಸ್. ಈಶ್ವರಪ್ಪ, ಸಚಿವರು

### ಏನಿದು ಸ್ವಾಮಿತ್ವ?

ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸರ್ವೇ ಆಫ್ ಇಂಡಿಯಾ ನೇತೃತ್ವದಲ್ಲಿ svamitva (ಸರ್ವೇ ಆಫ್ ವಿಲೇಜಸ್ ಆ್ಯಂಡ್ ಮ್ಯಾಪಿಂಗ್ ವಿತ್ ಇಂಪ್ರೂವೈಸ್ಡ್ ಟೆಕ್ನಾಲಜಿ ಇನ್ ವಿಲೇಜಸ್ ಏರಿಯಾ) ಯೋಜನೆ ರೂಪಿಸಿದೆ. ಕರ್ನಾಟಕ, ಹರಿಯಾಣ, ಮಧ್ಯಪ್ರದೇಶ, ಮಹಾರಾಷ್ಟ್ರ, ಉತ್ತರ ಪ್ರದೇಶ ಹಾಗೂ ಉತ್ತರಾಖಂಡ ರಾಜ್ಯಗಳಲ್ಲಿ ಪ್ರಾಯೋಗಿಕವಾಗಿ ಅನುಷ್ಠಾನ ಮಾಡಲಿದೆ.



ಡ್ರೋನ್ ಮೂಲಕ ಸರ್ವೆ ನಡೆಸಿ ಆಸ್ತಿ-ಪಾಸ್ತಿಯನ್ನು ಗುರುತಿಸಿರುವ ಚಿತ್ರ.

### ಯಾವ್ಯಾವ ಜಿಲ್ಲೆಗಳ ಆಯ್ಕೆ?

ಧಾರವಾಡ, ದಕ್ಷಿಣ ಕನ್ನಡ, ಬೆಳಗಾವಿ, ವಿಜಯಪುರ, ಗದಗ, ದಾವಣಗೆರೆ, ಕಲಬುರಗಿ, ಹಾಸನ, ಕೊಪ್ಪಳ, ಕೊಡಗು, ಮೈಸೂರು, ರಾಯಚೂರು, ರಾಮನಗರ, ತುಮಕೂರು, ಉತ್ತರ ಕನ್ನಡ ಮತ್ತು ಯಾದಗಿರಿ ಜಿಲ್ಲೆಗಳು.

### ಅನುಕೂಲಗಳೇನು?

- ಡ್ರೋನ್ ಆಧಾರಿತ ಸರ್ವೇ ನಡೆಸುವುದರಿಂದ ನಕ್ಷೆ ಹೆಚ್ಚು ನಿಖರವಾಗಿರಲಿದೆ.
- ಆಸ್ತಿ ತೆರಿಗೆಯನ್ನು ಕರಾರುವಾಕ್ ಆಗಿ ನಿರ್ಧರಿಸಲು ಸಹಾಯಕವಾಗುತ್ತದೆ.
- ಕರ ಸಂಗ್ರಹಣೆಯಿಂದ ಗ್ರಾಪಂಗಳು ಆರ್ಥಿಕವಾಗಿ ಸದೃಢವಾಗುತ್ತವೆ.
- ದಾಖಲೆಗಳ ಖಾತ್ರಿಯಿಂದ ಸಾಲ ಪಡೆಯಲು ಹಾಗೂ ಮಾರಾಟ ಮಾಡಲು ಅನುಕೂಲ
- ಸರ್ಕಾರಿ ಆಸ್ತಿ ಪರಭಾರೆ ಮಾಡಿದ್ದರೆ ವಶಪಡಿಸಿಕೊಳ್ಳಲು ನೆರವಾಗುತ್ತದೆ

### ಅನುಷ್ಠಾನ ಹೇಗೆ?

- ಸರ್ವೇ ಆಫ್ ಇಂಡಿಯಾ ಅಧಿಕಾರಿಗಳು ಗ್ರಾಪಂನಲ್ಲಿರುವ ದಾಖಲಾತಿಯನ್ನು ಸ್ಕ್ಯಾನ್ ಮಾಡಿಕೊಳ್ಳುತ್ತಾರೆ.
- ಗ್ರಾಮದ ಗಡಿ ಹಾಗೂ ಪ್ರತಿ ಆಸ್ತಿಯ ಮಾಲೀಕರ ಸಮ್ಮುಖದಲ್ಲೇ ಪರಿಶೀಲನೆ ನಡೆಸಿ ಬಿಳಿ ಬಣ್ಣ-ಸುಣ್ಣದಲ್ಲಿ ಗುರುತು ಮಾಡುತ್ತಾರೆ.
- ಗುರುತಿಸಿದ ಗಡಿಯ ಬಗ್ಗೆ ಗ್ರಾಪಂ ಸಭೆಯಲ್ಲಿ ಠರಾವು ಪಾಸ್ ಮಾಡಲಾಗುತ್ತದೆ.
- ಡ್ರೋನ್ ಸರ್ವೇ ಮಾಡಿ ಸ್ವತ್ತುಗಳ ಫೋಟೋ ಸೆರೆ ಹಿಡಿಯಲಾಗುತ್ತದೆ.
- ಸೆರೆ ಹಿಡಿದ ಚಿತ್ರಗಳನ್ನು ಸಂಸ್ಕರಿಸಿ, ಗುರುತಿಸಲಾದ ಆಸ್ತಿಗಳ ನಕಾಶೆಯನ್ನು ಸುಣ್ಣ ಅಥವಾ ಬಣ್ಣದಲ್ಲಿ ತಯಾರಿಸಲಾಗುತ್ತದೆ.
- ಗ್ರಾಪಂಗಳಲ್ಲಿ ನಮೂದಾಗಿರುವ ದಾಖಲಾತಿಗಳ ಜತೆ ಹೊಂದಾಣಿಕೆ ಮಾಡಿ ಪರಿಶೀಲನೆ ನಡೆಸಲಾಗುತ್ತದೆ.
- ಬಳಿಕ ಗ್ರಾಮಸ್ಥರ ಜತೆ ಸಭೆ ನಡೆಸಿ ತಕರಾರುಗಳಿದ್ದರೆ ಇತ್ಯರ್ಥಪಡಿಸಲಾಗುತ್ತದೆ.
- ಎಲ್ಲವೂ ಸರಿಯಾದ ಬಳಿಕ ಸರ್ಕಾರದ ದಾಖಲಾತಿಗೆ ರವಾನಿಸಲಾಗುತ್ತದೆ.
- ಈ ವೇಳೆ ಹೆಸರು ಅಥವಾ ಇನ್ನಿತರೆ ತಿದ್ದುಪಡಿಗೂ ಅವಕಾಶ ನೀಡಲಾಗಿದೆ.
- ದಾಖಲಾತಿ ಕಾರ್ಯ ಮುಗಿದ ಬಳಿಕ ಹಕ್ಕುಪತ್ರ ನೀಡಲಾಗುತ್ತದೆ